ಕರ್ನಾಟಕ ಸರ್ಕಾರ

ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
Email Id: commissioner.pue @gmail.com    Phone No: 080-23562033

ಸಂಖ್ಯೆ:ಪಪೂಶಿಇ/ಆ.ವಿ-ಎ/ವಿ.ನಿ-5/ಉ.ವರ್ಗಾ/2022-23    ದಿನಾಂಕ:07-08-2022.

# ಜ್ಞಾಪನ

**ವಿಷಯ**:- 2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿವಿಧ ವಿಷಯಗಳ ಉಪನ್ಯಾಸಕರ **ಕೋರಿಕೆ ವರ್ಗಾವಣೆ**ಯನ್ನು ಕೌನ್ಸೆಲಿಂಗ್ ಮೂಲಕ ನಡೆಸುವ ಬಗ್ಗೆ.

**ಉಲ್ಲೇಖ**:-1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2020, ದಿನಾಂಕ: 27-03-2020.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 47 ಶಾಸನ 2021, ದಿನಾಂಕ: 18-01-2022.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 32 ಟಿಪಿಯು 2021, ದಿನಾಂಕ:12-05-2022.
4. ಈ ಕಚೇರಿ ಸಮಸಂಖ್ಯೆ ವರ್ಗಾವಣಾ ಮಾರ್ಗಸೂಚಿ ದಿನಾಂಕ:18-05-2022.
5. ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ:14-07-2022.

-*-

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿವಿಧ ವಿಷಯಗಳ ಉಪನ್ಯಾಸಕರ ವರ್ಗಾವಣೆಯನ್ನು ನಡೆಸಲು ಉಲ್ಲೇಖ-1, 2 ಹಾಗೂ 3ರ ಆದೇಶಗಳಲ್ಲಿ ಅವಕಾಶ ಕಲ್ಪಿಸಿ ಆದೇಶಿಸಲಾಗಿದೆ. ಅದರಂತೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರಿಗೆ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಉಲ್ಲೇಖ-4ರ ವರ್ಗಾವಣಾ ಮಾರ್ಗಸೂಚಿಯಲ್ಲಿ ತಿಳಿಸಲಾಗಿ, ಒಟ್ಟು 3212 ಉಪನ್ಯಾಸಕರುಗಳು ವಿವಿಧ ಆದ್ಯತೆಯಡಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ವಿವಿಧ ಆದ್ಯತೆಯಡಿ ಸಲ್ಲಿಸಲಾದ ಅರ್ಜಿಗಳನ್ನು ಪರಿಶೀಲಿಸಿ, ಅಪೂರ್ಣ ದಾಖಲೆಗಳನ್ನು ಸಲ್ಲಿಸಿದ 377 ಅರ್ಜಿಗಳನ್ನು ಬೇರ್ಪಡಿಸಿ ಸಂಬಂಧಸಿದ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಅಪೂರ್ಣ ಅರ್ಜಿಗಳನ್ನು ಮರುಪರಿಶೀಲಿಸಿ ಸಲ್ಲಿಸಲು ಉಲ್ಲೇಖ-5ರಲ್ಲಿ ತಿಳಿಸಲಾಗಿತ್ತು. ಸದರಿ 377 ಅಪೂರ್ಣ ದಾಖಲೆ ಹೊಂದಿರುವ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರು ಪರಿಶೀಲಿಸಿ, ಅರ್ಹ ಹಾಗೂ ಅನರ್ಹ ಎಂದು ಪಟ್ಟಿ ಮಾಡಿ ಸಲ್ಲಿಸಿರುತ್ತಾರೆ. ಅದರನ್ವಯ ವಿವಿಧ ಆದ್ಯತೆಯಡಿಯಲ್ಲಿ ಹಾಗೂ ಇತರೆ ವರ್ಗದಲ್ಲಿ (ಯಾವುದೇ ಆದ್ಯತೆಯಿಲ್ಲದಿರುವ)ಸಲ್ಲಿಸಲಾದ ಅರ್ಜಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿವಿಧ ವಿಷಯಗಳ ಉಪನ್ಯಾಸಕರ ಸ್ಥಳ ನಿಯುಕ್ತಿ ವರ್ಗಾವಣೆ ಕೌನ್ಸೆಲಿಂಗ್ ಅನ್ನು ದಿನಾಂಕ: 08-08-2022ರ ಬೆಳಗ್ಗೆ 10-00 ಗಂಟೆಯಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳ ಕಚೇರಿಯಲ್ಲಿ / ಜಿಲ್ಲಾ ಉಪನಿರ್ದೇಶಕರು ಸೂಚಿಸುವ ಸ್ಥಳಗಳಲ್ಲಿ ಝೂಮ್ ತಂತ್ರಾಂಶದ ಮುಖೇನ ನಡೆಸಲಾಗುತ್ತಿದ್ದು, ವೇಳಾಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ಜಿಲ್ಲಾ ಉಪನಿರ್ದೇಶಕರುಗಳಿಗೆ ಹಾಗೂ ಸ್ಥಳನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗುವ ಉಪನ್ಯಾಸಕರುಗಳು ಕೌನ್ಸೆಲಿಂಗ್‌ಗೆ ಹಾಜರಾಗುವ ಮುನ್ನ ತೆಗೆದುಕೊಳ್ಳಬೇಕಾದ ಕ್ರಮದ ವಿವರ ಈ ಕೆಳಕಂಡಂತಿದೆ:

1. ಜಿಲ್ಲಾ ಉಪ ನಿರ್ದೇಶಕರು/ಕಚೇರಿ ಸಿಬ್ಬಂದಿ ವರ್ಗದವರು ವಿವಿಧ ಆದ್ಯತೆಯಡಿ ಸಲ್ಲಿಸಲಾದ ಉಪನ್ಯಾಸಕರ ಮೂಲ ದಾಖಲೆಗಳನ್ನು ಪರಿಶೀಲಿಸತಕ್ಕದ್ದು.

2. ವಿವಿಧ ಆದ್ಯತೆ ಅಡಿ ಸಲ್ಲಿಸಲಾದ ಉಪನ್ಯಾಸಕರುಗಳನ್ನು ಕೌನ್ಸೆಲಿಂಗ್ ನಡೆಯುವ ಸಂದರ್ಭದಲ್ಲಿ ಅವರ ಜೇಷ್ಠತೆ ಆಧಾರದ ಮೇಲೆ ಅವಕಾಶ ಕಲ್ಪಿಸತಕ್ಕದ್ದು.
3. ವಿವಿಧ ಆದ್ಯತೆ ಅಡಿ ಸಲ್ಲಿಸಲಾದ ಉಪನ್ಯಾಸಕರುಗಳು ಮೂಲ ದಾಖಲೆಗಳನ್ನು ಕೌನ್ಸೆಲಿಂಗ್ ಸಂದರ್ಭದಲ್ಲಿ ಅಧಿಕಾರಿಗಳಿಗೆ ಪರಿಶೀಲನೆಗೆ ಸಲ್ಲಿಸದಿದ್ದಲ್ಲಿ ಅಥವಾ ತಪ್ಪು ದಾಖಲೆಗಳನ್ನು ಸಲ್ಲಿಸಿದಲ್ಲಿ ಅಂತಹ ಉಪನ್ಯಾಸಕರನ್ನು ಕೌನ್ಸೆಲಿಂಗ್‌ಗೆ ಅವಕಾಶ ನೀಡಲಾಗುವುದಿಲ್ಲ.
4. ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಉಪನ್ಯಾಸಕರುಗಳು ವರ್ಗಾವಣೆ ಬಯಸಿ ಸಲ್ಲಿಸಲಾದ ಆನ್-ಲೈನ್ ಅರ್ಜಿಯ ಪ್ರತಿಯನ್ನು ಉಪನಿರ್ದೇಶಕರ ಕಚೇರಿ ಅಧಿಕಾರ/ಸಿಬ್ಬಂದಿ ಪರಿಶೀಲಿಸಲು ಕೋರಿದಾಗ ಸಲ್ಲಿಸಲು ಸೂಚಿಸಿದೆ.
5. ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಉಪನ್ಯಾಸಕರುಗಳು ಇಲಾಖೆಯಿಂದ ನೀಡಲಾಗಿರುವ ಗುರುತಿನ ಚೀಟಿಯನ್ನು ಹಾಗೂ ಪ್ರಾಂಶುಪಾಲರಿಂದ ಸೇವಾ ದೃಢೀಕರಣ ಪತ್ರವನ್ನು ಪಡೆದಿಟ್ಟುಕೊಳ್ಳತಕ್ಕದ್ದು.
6. ಸ್ಥಳ ನಿಯುಕ್ತಿ ಕೌನ್ಸೆಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಉಪನ್ಯಾಸಕರುಗಳಿಂದ ಆಯ್ಕೆ ಮಾಡಿಕೊಳ್ಳುವ ಕಾಲೇಜಿನ ವಿವರದ ಬಗ್ಗೆ ಉಪ ನಿರ್ದೇಶಕರ ಕಚೇರಿ ಸಿಬ್ಬಂದಿಗಳು ಒಪ್ಪಿಗೆ ಪತ್ರವನ್ನು ಪಡೆದುಕೊಳ್ಳುವುದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**<u>ಇವರಿಗೆ:</u>**

1. ರಾಜ್ಯದ ಎಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ – ಮುಂದಿನ ಅಗತ್ಯ ಕ್ರಮಕ್ಕಾಗಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು – ಇಲಾಖಾ ಜಾಲತಾಣದಲ್ಲಿ ಪ್ರಕಟಿಸುವುದು.
3. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಎಲ್ಲಾ ಪ್ರಾಂಶುಪಾಲರುಗಳಿಗೆ - ಇಲಾಖಾ ಅಂತರ್ಜಾಲದ ಮುಖಾಂತರ – ಅಗತ್ಯ ಕ್ರಮಕ್ಕಾಗಿ.
4. ಸಂಬಂಧಿಸಿದ ಉಪನ್ಯಾಸಕರುಗಳಿಗೆ – ಇಲಾಖಾ ಅಂತರ್ಜಾಲದ ಮುಖಾಂತರ – ಅಗತ್ಯ ಕ್ರಮಕ್ಕಾಗಿ.
5. ಕಚೇರಿ/ಹೆಚ್ಚುವರಿ ಪ್ರತಿ.